**All India Radio: Bangalore**
**National Bulletin In Kannada**
**05.05.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.05.2026  07.35 a.m.**

**<><><><>**

ಮುಖ್ಯಾಂಶಗಳು

1. ಇತ್ತೀಚಿನ ಚುನಾವಣಾ ಫಲಿತಾಂಶ ಭಾರತದ ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಜಯ – ಪ್ರಧಾನಿ ನರೇಂದ್ರ ಮೋದಿ
2. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ದಿಗ್ವಿಜಯ, ತಮಿಳುನಾಡಿನಲ್ಲಿ ವಿಜಯ್ ನೇತೃತ್ವದ 'ಟಿವಿಕೆ' ಅತಿ ದೊಡ್ಡ ಪಕ್ಷವಾಗಿ ಉದಯ
3. ಜಮೈಕಾದ ಸಚಿವರೊಂದಿಗೆ ಕೇಂದ್ರ ಸಚಿವ ಡಾ.ಎಸ್.ಜೈಶಂಕರ್ ಉನ್ನತ ಮಟ್ಟದ ಸಭೆ ; ಹಲವು ಕ್ಷೇತ್ರಗಳಲ್ಲಿ ಸಹಕಾರ ಬಲವರ್ಧನೆಗೆ ಒತ್ತು
4. ಪಶ್ಚಿಮ ಏಷ್ಯಾ ಸಂಘರ್ಷ ; ಅಮೆರಿಕ, ಇರಾನ್ ನಡುವೆ ಮುಂದುವರಿದ ಉದ್ವಿಗ್ನತೆ
5. ಮಧ್ಯಪ್ರಾಚ್ಯ ಪರಿಸ್ಥಿತಿ ಹಿನ್ನೆಲೆ : ಜಾಗತಿಕ ತೈಲಬೆಲೆಯಲ್ಲಿ ಭಾರೀ ಏರಿಕೆಯ ನಂತರ ಇಂದು ಅಲ್ಪ ಇಳಿಕೆ

<><><><>

ಸೋಲು ಗೆಲುವುಗಳು ಪ್ರಜಾಪ್ರಭುತ್ವದ ಭಾಗವಾಗಿದ್ದು, ಈ ಚುನಾವಣೆಯ ಫಲಿತಾಂಶವು ಭಾರತದ ಪ್ರಜಾಪ್ರಭುತ್ವ ಮತ್ತು ಭಾರತೀಯ ಸಂವಿಧಾನದ ಜಯವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ನವದೆಹಲಿಯ ಬಿಜೆಪಿ ಕೇಂದ್ರ ಕಚೇರಿಯಲ್ಲಿ ನಿನ್ನೆ ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ, ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ, ತಮಿಳುನಾಡು ಹಾಗೂ ಕೇರಳಂ ರಾಜ್ಯಗಳ ಜನತೆ ಮತ್ತು ಪಕ್ಷದ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸಿದರು. ಜನತೆ ಭಾರತದ ಪ್ರಜಾಪ್ರಭುತ್ವದ ಮೇಲೆ, ಕಾರ್ಯಕ್ಷಮತೆಯ ರಾಜಕೀಯದ ಮೇಲೆ ಹಾಗೂ 'ಏಕ್ ಭಾರತ್ ಶ್ರೇಷ್ಠ ಭಾರತ್' ಮೇಲೆ ನಂಬಿಕೆ ಇಟ್ಟಿದ್ದಾರೆ ಎಂದ ಅವರು, ಜನರ ವಿಶ್ವಾಸದಿಂದ ಮತ್ತೊಮ್ಮೆ ಕಮಲ ಅರಳಿರುವುದಕ್ಕೆ ಹರ್ಷ ವ್ಯಕ್ತಪಡಿಸಿದರು. ವಿಧಾನಸಭೆ ಚುನಾವಣೆಯಲ್ಲಿ ದಾಖಲೆ ಮಟ್ಟದ ಮತದಾನದ

ಪ್ರಮಾಣವು ದೇಶದ ಪ್ರಜಾಪ್ರಭುತ್ವದ ಉಜ್ವಲ ಚಿತ್ರಣವನ್ನು ನೀಡುತ್ತದೆ ಎಂದ ಅವರು, ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್‌ಗಳು)**

ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ಅಧ್ಯಕ್ಷ ನಿತಿನ್ ನಬೀನ್, ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ಜನತೆ ನೀಡಿದ ಬೆಂಬಲ ಮತ್ತು ವಿಶ್ವಾಸಕ್ಕೆ ಧನ್ಯವಾದ ಸಲ್ಲಿಸಿ, ಅಸ್ಸಾಂ, ಪಶ್ಚಿಮ ಬಂಗಾಳ ಮತ್ತು ಪುದುಚೇರಿ ರಾಜ್ಯಗಳ ವಿಧಾನಸಭೆ ಚುನಾವಣಾ ಫಲಿತಾಂಶಗಳು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದ ಮೇಲೆ ಜನತೆ ಹೊಂದಿರುವ ಅಚಲವಾದ ಬೆಂಬಲ ಮತ್ತು ನಂಬಿಕೆಯನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಭಾರಿ ಜಯ ಗಳಿಸಿರುವುದಕ್ಕೆ, ಪಕ್ಷದ ಕಾರ್ಯಕರ್ತರ ನಿರಂತರ ಪರಿಶ್ರಮ ಮತ್ತು ಸಮರ್ಪಣೆಯ ಫಲವಾಗಿದೆ ಎಂದು ಕೃತಜ್ಞತೆ ವ್ಯಕ್ತಪಡಿಸಿದರು.

<><><><>

ಪಶ್ಚಿಮ ಬಂಗಾಳ ಮತ್ತು ತಮಿಳುನಾಡು ವಿಧಾನಸಭಾ ಚುನಾವಣೆಗಳಲ್ಲಿ ಅಭೂತಪೂರ್ವ ಬೆಳವಣಿಗೆಗಳಾಗಿದ್ದು, ಭಾರತೀಯ ಚುನಾವಣಾ ಇತಿಹಾಸದಲ್ಲಿ ಹೊಸ ದಾಖಲೆ ನಿರ್ಮಾಣವಾಗಿದೆ. ಪಶ್ಚಿಮ ಬಂಗಾಳದಲ್ಲಿ ಮೊದಲ ಬಾರಿಗೆ ಭಾರತೀಯ ಜನತಾ ಪಕ್ಷ-ಬಿಜೆಪಿ ಭರ್ಜರಿ ಬಹುಮತದೊಂದಿಗೆ ಅಧಿಕಾರದ ಚುಕ್ಕಾಣಿ ಹಿಡಿದಿದ್ದರೆ, ತಮಿಳುನಾಡಿನಲ್ಲಿ ನಟ ವಿಜಯ್ ನೇತೃತ್ವದ ನೂತನ ಪಕ್ಷವಾದ ತಮಿಳಗ ವೆಟ್ರಿ ಕಳಗಂ - ಟಿವಿಕೆ, ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಇನ್ನುಳಿದಂತೆ ಅಸ್ಸಾಂ ಮತ್ತು ಪುದುಚೇರಿಯಲ್ಲಿ ಆಡಳಿತಾರೂಢ ಸರ್ಕಾರಗಳು ಮತ್ತೆ ಅಧಿಕಾರವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದರೆ, ಕೇರಳಂನಲ್ಲಿ ಮತದಾರರು ಹೊಸ ಸರ್ಕಾರಕ್ಕೆ ಮನ್ನಣೆ ನೀಡಿದ್ದಾರೆ. ಪಶ್ಚಿಮ ಬಂಗಾಳದ ಒಟ್ಟು ೨೯೪ ವಿಧಾನಸಭಾ ಕ್ಷೇತ್ರಗಳ ಪೈಕಿ ೨೯೨ ಕ್ಷೇತ್ರಗಳ ಫಲಿತಾಂಶ ಪ್ರಕಟವಾಗಿದ್ದು, ಬಿಜೆಪಿ ೨೦೬ ಕ್ಷೇತ್ರಗಳನ್ನು ಗೆಲ್ಲುವ ಮೂಲಕ ಮೂರನೇ ಎರಡರಷ್ಟು ಬಹುಮತದೊಂದಿಗೆ ತೃಣಮೂಲ ಕಾಂಗ್ರೆಸ್‌ನ ೧೫ ವರ್ಷಗಳ ಸುದೀರ್ಘ ಆಡಳಿತಕ್ಕೆ ತೆರೆ ಎಳೆದಿದೆ. ಕಳೆದ ಚುನಾವಣೆಯಲ್ಲಿ ಭಾರಿ ಪೈಪೋಟಿ ನೀಡಿದ್ದ ಟಿಎಂಸಿ ಈ ಬಾರಿ ಕೇವಲ ೮೦ ಕ್ಷೇತ್ರಗಳಲ್ಲಿ ಗೆದ್ದು, ೧ ಸ್ಥಾನದಲ್ಲಿ ಮುನ್ನಡೆ ಕಾಯ್ದುಕೊಳ್ಳುವಲ್ಲಿ ಸಫಲವಾಗಿದೆ. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ನಂತರ ನಡೆದ ಈ ಮೊದಲ

ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಆಮ್ ಜನತಾ ಉನ್ನಯನ್ ಪಕ್ಷ ತಲಾ ಎರಡು ಸ್ಥಾನಗಳನ್ನು ಗಳಿಸಿದರೆ, ಸಿಪಿಐಎಂ ಒಂದು ಸ್ಥಾನವನ್ನು ಪಡೆದಿದೆ. ಪ್ರಮುಖ ಬೆಳವಣಿಗೆಯಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಭವಾನಿಪುರ ಕ್ಷೇತ್ರದಲ್ಲಿ ಬಿಜೆಪಿಯ ಸುವೇಂದು ಅಧಿಕಾರಿ ವಿರುದ್ಧ ೧೫ ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಸೋಲನುಭವಿಸಿದ್ದಾರೆ.

ತಮಿಳುನಾಡಿನ ರಾಜಕೀಯ ರಂಗದಲ್ಲಿ ನಟ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ ಟಿವಿಕೆ ಪಕ್ಷ ಇತಿಹಾಸ ಬರೆದಿದೆ. ತನ್ನ ಚೊಚ್ಚಲ ಚುನಾವಣೆಯಲ್ಲೇ ೧೦೮ ಸ್ಥಾನಗಳನ್ನು ಗೆಲ್ಲುವ ಮೂಲಕ ಟಿವಿಕೆ, ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಪಕ್ಷದ ಮುಖ್ಯಸ್ಥ ಹಾಗೂ ನಟ ಸಿ. ಜೋಸೆಫ್ ವಿಜಯ್, ಸ್ಪರ್ಧಿಸಿದ್ದ ಪೆರಂಬೂರು ಮತ್ತು ತಿರುಚಿ ಪೂರ್ವ ಎರಡೂ ಕ್ಷೇತ್ರಗಳಲ್ಲಿ ಜಯ ದಾಖಲಿಸಿದ್ದಾರೆ. ೨೩೪ ಸದಸ್ಯ ಬಲದ ವಿಧಾನಸಭೆಯಲ್ಲಿ ಆಡಳಿತಾರೂಢ ಡಿಎಂಕೆ ೫೯ ಸ್ಥಾನಗಳನ್ನು ಹಾಗೂ ಎಐಎಡಿಎಂಕೆ ೪೭ ಸ್ಥಾನಗಳನ್ನು ಪಡೆದುಕೊಂಡಿವೆ. ವಿಶೇಷವೆಂದರೆ, ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್, ಕೊಳತ್ತೂರು ಕ್ಷೇತ್ರದಲ್ಲಿ ಟಿವಿಕೆ ಅಭ್ಯರ್ಥಿ ವಿ.ಎಸ್. ಬಾಬು ವಿರುದ್ಧ ಪರಾಭವಗೊಂಡಿದ್ದಾರೆ. ಅಸ್ಸಾಂನಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಸತತ ಮೂರನೇ ಬಾರಿಗೆ ಅಧಿಕಾರಕ್ಕೆ ಬರುವ ಮೂಲಕ ಐತಿಹಾಸಿಕ ಸಾಧನೆ ಮಾಡಿದೆ. ೧೨೬ ಸದಸ್ಯ ಬಲದ ವಿಧಾನಸಭೆಯಲ್ಲಿ ಬಿಜೆಪಿ ಏಕಾಂಗಿಯಾಗಿ ೮೨ ಸ್ಥಾನಗಳನ್ನು ಗೆದ್ದರೆ, ಅದರ ಮಿತ್ರಪಕ್ಷಗಳಾದ ಅಸೋಂ ಗಣ ಪರಿಷತ್ -ಎಜಿಪಿ ೯ ಮತ್ತು ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್ -ಬಿಪಿಎಫ್ ೧೦ ಸ್ಥಾನಗಳಲ್ಲಿ ಜಯ ಸಾಧಿಸಿವೆ. ಕೇರಳಂನಲ್ಲಿ ಯುಡಿಎಫ್ ಮೈತ್ರಿಕೂಟ ಭರ್ಜರಿ ಜಯ ದಾಖಲಿಸಿದ್ದು, ಕಾಂಗ್ರೆಸ್ ೬೩ ಮತ್ತು ಐಯುಎಂಎಲ್ ೨೨ ಸ್ಥಾನಗಳನ್ನು ಪಡೆಯುವ ಮೂಲಕ ರಾಜ್ಯದಲ್ಲಿ ಪ್ರಾಬಲ್ಯ ಮೆರೆದಿವೆ. ಎಡಪಕ್ಷಗಳ ಆಡಳಿತಕ್ಕೆ ಇಲ್ಲಿ ಹಿನ್ನಡೆಯಾಗಿದ್ದು, ಸಿಪಿಎಂ ಹೊರತುಪಡಿಸಿ ಕೇವಲ ಸಿಪಿಐ ಮತ್ತು ಆರ್‌ಜೆಡಿ ಅಲ್ಪ ಸ್ಥಾನಗಳನ್ನು ಗಳಿಸಿವೆ. ಬಿಜೆಪಿ ೩ ಕ್ಷೇತ್ರಗಳಲ್ಲಿ ಗೆದ್ದಿದೆ. ಇನ್ನು, ಕೇಂದ್ರಾಡಳಿತ ಪ್ರದೇಶವಾದ ಪುದುಚೇರಿಯಲ್ಲಿ ಎನ್‌ಡಿಎ ಮೈತ್ರಿಕೂಟ ೩೦ ಕ್ಷೇತ್ರಗಳ ಪೈಕಿ ೧೮ರಲ್ಲಿ ಜಯಗಳಿಸುವ ಮೂಲಕ ಸರಳ ಬಹುಮತದೊಂದಿಗೆ ಸರ್ಕಾರ ರಚಿಸಲು ಸಜ್ಜಾಗಿದೆ.

<><><><>

ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ಜಮೈಕಾ ವಿದೇಶಾಂಗ ಸಚಿವೆ ಕಮಿನಾ ಜಾನ್ಸನ್ ಸ್ಮಿತ್ ಹಾಗೂ ಅಲ್ಲಿನ ಇತರ ಸಚಿವರೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಸಭೆಯಲ್ಲಿ ಭಾರತ ಮತ್ತು ಜಮೈಕಾ ನಡುವಿನ ದ್ವಿಪಕ್ಷೀಯ ಸಹಭಾಗಿತ್ವದ ವಿವಿಧ ಆಯಾಮಗಳ ಕುರಿತು ಪರಾಮರ್ಶೆ ನಡೆಸಲಾಯಿತು. ವಿಶೇಷವಾಗಿ ಶಿಕ್ಷಣ, ಆರೋಗ್ಯ, ಕೃಷಿ, ಡಿಜಿಟಲ್ ಪ್ರವಾಸೋದ್ಯಮ, ಕ್ರೀಡೆ, ಮನೋರಂಜನೆ, ಮೂಲಸೌಕರ್ಯ ಮತ್ತು ಸಾಮರ್ಥ್ಯವೃದ್ಧಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಹಕಾರ ಬಲವರ್ಧಿಸುವ ಕುರಿತು ಚರ್ಚಿಸಲಾಯಿತು ಎಂದಿದ್ದಾರೆ. ಜಮೈಕಾದ ಪ್ರಮುಖ ಉದ್ದಿಮೆಗಳು ಹಾಗೂ ವಾಣಿಜ್ಯ ಕ್ಷೇತ್ರದ ನಾಯಕರೊಂದಿಗೆ ಸಚಿವ ಡಾ.ಜೈಶಂಕರ್ ಸಂವಾದ ನಡೆಸಿದರು. ಉಭಯ ರಾಷ್ಟ್ರಗಳ ನಡುವಿನ ಆರ್ಥಿಕ ಸಹಕಾರದ ಸಾಮರ್ಥ್ಯವನ್ನು ದ್ವಿಪಕ್ಷೀಯ ಮತ್ತು ಪ್ರಾದೇಶಿಕ ಹಿತದೃಷ್ಟಿಯಿಂದ ಮತ್ತಷ್ಟು ಸಕ್ರಿಯವಾಗಿ ಬಳಸಿಕೊಳ್ಳುವ ಅವಶ್ಯಕತೆಯಿದೆ ಎಂದು ಇದೇ ಸಂದರ್ಭದಲ್ಲಿ ಸಚಿವರು ತಿಳಿಸಿದರು.

<><><><>

ಹೊರ್ಮುಜ್ ಜಲಸಂಧಿಯಲ್ಲಿ ಅಮೆರಿಕ, ಇರಾನ್ ನಡುವೆ ಮಿಲಿಟರಿ ಸಂಘರ್ಷ ತೀವ್ರಗೊಂಡಿದ್ದು, ಉಭಯ ದೇಶಗಳ ನಡುವೆ ಎಚ್ಚರಿಕೆಗಳ ಸರಣಿ ಮುಂದುವರೆದಿದೆ. ಅಮೆರಿಕದ ಹಡುಗಗಳ ಮೇಲೆ ದಾಳಿ ನಡೆಸಿದರೆ ಇರಾನ್ ಕಠಿಣ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ಅಮೆರಿಕದ ಪಡೆಗಳು ಹೆಲಿಕಾಪ್ಟರ್ ಬಳಸಿ ಇರಾನ್‌ನ ಏಳು ವೇಗದ ದೋಣಿಗಳನ್ನು ನಾಶಪಡಿಸಿವೆ. ಆಯಕಟ್ಟಿನ ಜಲಮಾರ್ಗದಲ್ಲಿ ಹಡಗುಗಳ ಸುರಕ್ಷಿತ ಸಂಚಾರಕ್ಕಾಗಿ ಹಮ್ಮಿಕೊಂಡಿರುವ "ಪ್ರಾಜೆಕ್ಟ್ ಫ್ರೀಡಂ"ನ ಭಾಗವಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ತಿಳಿಸಿದೆ. ಮತ್ತೊಂದೆಡೆ, ಜಲಸಂಧಿಯನ್ನು ಮುಚ್ಚಿರುವುದಾಗಿ ಪ್ರತಿಪಾದಿಸಿರುವ ಇರಾನ್, ಅಮೆರಿಕದ ಯುದ್ಧನೌಕೆಗಳತ್ತ ಎಚ್ಚರಿಕೆಯ ಗುಂಡುಗಳನ್ನು ಹಾರಿಸಿರುವುದಾಗಿ ಹೇಳಿಕೊಂಡಿದೆ. ಆದರೆ ಅಮೆರಿಕವು ತನ್ನ ನೌಕೆಗಳಿಗೆ ಯಾವುದೇ ಹಾನಿಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ. ಈ ನಡುವೆ, ಸಂಘರ್ಷದ ವಲಯದಲ್ಲಿ ಸುಮಾರು ೮೭ ರಾಷ್ಟ್ರಗಳ ಹಡಗುಗಳು ಸಿಲುಕಿಕೊಂಡಿವೆ ಎಂದು ವರದಿಯಾಗಿದೆ. ಅಧ್ಯಕ್ಷ ಟ್ರಂಪ್

ಅಮೆರಿಕದ ಮಿಲಿಟರಿ ಸಾಮರ್ಥ್ಯವನ್ನು ಪುನರುಚ್ಚರಿಸುವ ಮೂಲಕ ಇರಾನ್‌ಗೆ ಮತ್ತೆ ಎಚ್ಚರಿಕೆ ನೀಡಿದ್ದು, ಈ ಭಾಗದಲ್ಲಿ ಉದ್ವಿಗ್ನತೆ ಮತ್ತಷ್ಟು ಉಲ್ಬಣಗೊಂಡಿದೆ.

<><><><>

ಏಪ್ರಿಲ್ ೮ರಂದು ಅಮೆರಿಕ ಮತ್ತು ಇರಾನ್ ನಡುವೆ ಕದನ ವಿರಾಮ ಜಾರಿಗೆ ಬಂದ ಬಳಿಕ ಹಲವು ವಾರಗಳ ಶಾಂತ ವಾತಾವರಣ ನಿನ್ನೆಯ ದಾಳಿಯಿಂದ ಭಂಗಗೊಂಡಿದೆ. ಯುಎಇ ಫುಜೈರಾ ತೈಲ ಕೈಗಾರಿಕಾ ವಲಯದಲ್ಲಿ ನಿನ್ನೆ ಭಾರೀ ಅಗ್ನಿ ಅವಘಡ ಸಂಭವಿಸಿದೆ. ಅಧಿಕಾರಿಗಳ ಪ್ರಕಾರ, ಇರಾನ್‌ನ ಡ್ರೋನ್ ದಾಳಿಯಿಂದಾಗಿ ಈ ಬೆಂಕಿ ಕಾಣಿಸಿಕೊಂಡಿದೆ. ಕಳೆದ ತಿಂಗಳು ಜಾರಿಗೆ ಬಂದ ಯುದ್ಧ ವಿರಾಮದ ನಂತರ ಯುಎಇ ಭೂಭಾಗದಲ್ಲಿ ಗಂಭೀರ ಹಾನಿ ಉಂಟುಮಾಡಿದ ಮೊದಲ ದಾಳಿ ಇದಾಗಿದೆ.

<><><><>

ಕಳೆದ ವಹಿವಾಟಿನಲ್ಲಿ ಭಾರೀ ಏರಿಕೆ ಕಂಡಿದ್ದ ಜಾಗತಿಕ ತೈಲಬೆಲೆಗಳು ಇಂದು ಅಲ್ಪ ಪ್ರಮಾಣದ ಇಳಿಕೆ ಕಂಡಿದೆ. ಅಮೆರಿಕ ಮತ್ತು ಇರಾನ್ ನಡುವೆ ಉದ್ವಿಗ್ನತೆಯ ಹಿನ್ನೆಲೆಯಲ್ಲಿ ತೈಲಪೂರೈಕೆಯಲ್ಲಿ ಉಂಟಾಗಬಹುದಾದ ಅಪಾಯಗಳನ್ನು ಮಾರುಕಟ್ಟೆಗಳು ಸೂಕ್ಷ್ಮವಾಗಿ ಗಮನಿಸುತ್ತಿವೆ. ಜುಲೈ ತಿಂಗಳ ವಿತರಣೆಯ ಬ್ರೆಂಟ್ ಕಚ್ಚಾತೈಲದ ಭವಿಷ್ಯ ಬೆಲೆ ಇಂದು ಶೇಕಡ ೦.೬ರಷ್ಟು ಇಳಿಕೆಯಾಗಿದ್ದು, ಪ್ರತಿ ಬ್ಯಾರೆಲ್‌ಗೆ ೧೧೩ ಡಾಲರ್ ೭೭ ಸೆಂಟ್‌ಗಳಿಗೆ ತಲುಪಿದೆ. ಅದೇ ರೀತಿ ಡಬ್ಲ್ಯುಟಿಐ ಕಚ್ಚಾತೈಲ ಬೆಲೆ ಶೇಕಡ ೧.೩೫ರಷ್ಟು ಕುಸಿತ ಕಂಡು ಪ್ರತಿ ಬ್ಯಾರೆಲ್‌ಗೆ ೧೦೫ ಡಾಲರ್ ೬ ಸೆಂಟ್‌ಗಳಿಗೆ ತಲುಪಿದೆ. ಇದಕ್ಕೂ ಮುನ್ನ ನಿನ್ನೆ ಪೂರೈಕೆ ವ್ಯತ್ಯಯ ಆತಂಕದಿಂದಗಿ ತೈಲಬೆಲೆಗಳು ಗಣನೀಯ ಏರಿಕೆ ಕಂಡಿದ್ದವು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>